**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂಖ್ಯೆ: ಡಿಟಿಇ 02 ಡಿವಿಪಿ (1) 2023

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ: 14.03.2024.

**:ಹಿಂಬರಹ:**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ತಿಂಗಳಿಗೆ ಒಂದು ದಿನ ಸಾಂದರ್ಭಿಕ ರಜೆ ನೀಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಡಿಟಿಇ 2024, ಬೆಂಗಳೂರು. ದಿನಾಂಕ 14.03.2024.

ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಗರಿಷ್ಠ ಮಾಸಿಕ ಕಾರ್ಯಭಾರವನ್ನು ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿರುವ ಸರ್ಕಾರಿ ಆದೇಶವನ್ನು ಮಾಹಿತ ಹಾಗೂ ಮುಂದಿನ ಕ್ರಮ ವಹಿಸಲು ಸೂಚಿಸಲಾಗಿದೆ.

**ನಿರ್ದೇಶಕರು.**
**ತಾಂತ್ರಿಕ ಶಿಕ್ಷಣ ಇಲಾಖೆ.**

ಇವರಿಗೆ,

14/03

**ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆ/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.**

ಪ್ರತಿ

1. ಆಯುಕ್ತರ ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು.
2. ಜಂಟಿ ನಿರ್ದಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು.
3. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4. ಲೆಕ್ಕಾಧಿಕಾರಿಗಳು (ಬಿಲ್ಸ್). ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
5. ಇ.ಎಸ್.ಟಿ(1) ವಿಭಾಗ, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ತಿಂಗಳಿಗೆ ಒಂದು ದಿನ ಸಾಂದರ್ಭಿಕ ರಜೆ ನೀಡುವ ಬಗ್ಗೆ.

ಓದಲಾಗಿದೆ:
1. ಇದೇ ಸಮ ಸಂಖ್ಯೆಯ ಸರ್ಕಾರದ ಆದೇಶ ದಿನಾಂಕ:04-03-2024.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕಕಡತ ಸಂಖ್ಯೆ:DCE/APT1/GFD/3/2024 (ಗಣಕ ಸಂಖ್ಯೆ:1293990).

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ದಿನಾಂಕ:01.01.2024 ರಿಂದ ಜಾರಿಗೆ ಬರುವಂತೆ ಗೌರವಧನ, ಇಡಿಗಂಟು ಹಾಗೂ ಆರೋಗ್ಯ ವಿಮೆ ಸೌಲಭ್ಯಗಳನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕಕಡತದಲ್ಲಿ ದಿನಾಂಕ:22.12.2023 ರಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಗರಿಷ್ಠ ಮಾಸಿಕ ಕಾರ್ಯಭಾರ ನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು (ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸುವ ಷರತ್ತಿಗೊಳಪಟ್ಟು) ಮಂಜೂರು ಮಾಡಲು ನಿರ್ಣಯಿಸಲಾಗಿರುತ್ತದೆ.

ಅದರನ್ವಯ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಗರಿಷ್ಠ ಮಾಸಿಕ ಕಾರ್ಯಭಾರವನ್ನು ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರತಿ ತಿಂಗಳಿಗೆ ಒಂದು ದಿನ ಸಾಂದರ್ಭಿಕ ರಜೆ ಮಂಜೂರು ಮಾಡುವಂತೆ ಕೋರಿ ಏಕ ಕಡತದಲ್ಲಿ ಸರ್ಕಾರಕ್ಕೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಡಿಟಿಇ 2024,**
**ಬೆಂಗಳೂರು, ದಿನಾಂಕ: 14-03-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಗರಿಷ್ಠ ಮಾಸಿಕ ಕಾರ್ಯಭಾರವನ್ನು ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿ ಆದೇಶಿಸಿದೆ. ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/3/2024

(ಮಹಾಂತೇಶಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), (ಎ ಮತ್ತು ಎಸ್.ಎಸ್.ಎ) ಮತ್ತು (ಇ ಮತ್ತು ಆರ್.ಎಸ್.ಎ), ಬೆಂಗಳೂರು.

------2

2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಪ್ರಾಂಶುಪಾಲರು, ಎಲ್ಲಾ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು (ಆಯುಕ್ತರ ಮುಖಾಂತರ)
5. ಅರೆಕಾಲಿಕ ಉಪನ್ಯಾಸಕರುಗಳು, ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು (ಆಯುಕ್ತರ ಮುಖಾಂತರ)
6. ಇ-ಆಡಳಿತ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)/ಶಾಖಾ ರಕ್ಷಾ ಕಡತ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ ಬೆಂಗಳೂರು.
3. ಮಾನ್ಯ ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ ಬೆಂಗಳೂರು.